# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಕಬಿನಿ ಜಲಾಶಯದ ಕೂಡು ರಸ್ತೆಯನ್ನು ಸಿಮೆಂಟ್ ಕಾಂಕ್ರೀಟ್ ರಸ್ತೆಯಾಗಿ ನಿರ್ಮಿಸುವ (ಕೊಲ್ಲೆಗೌಡನಹಳ್ಳಿ ವೃತ್ತದಿಂದ ಬೀದರಹಳ್ಳಿ ವೃತ್ತದವರೆಗೆ) ರೂ.25.30 ಕೋಟಿ ಮೊತ್ತದ ಕಾಮಗಾರಿಯ ಅಂದಾಜಿಗೆ, 2019-20 ನೇ ಸಾಲಿನ ಪರಿಶಿಷ್ಟ ಪಂಗಡ ಉಪ ಯೋಜನೆ ಅಡಿಯಲ್ಲಿ ಕೈಗೆತ್ತಿಕೊಳ್ಳುವ ಸಂಬಂಧ ಆಡಳಿತಾತ್ಮಕ ಅನುಮೋದನೆ ನೀಡುವ ಬಗ್ಗೆ.

** ** **

**ಓದಲಾಗಿದೆ :-**

1. ವ್ಯವಸ್ಥಾಪಕ ನಿರ್ದೇಶಕರು, ಕಾವೇರಿ ನೀರಾವರಿ ನಿಗಮ, ಬೆಂಗಳೂರು ಇವರ ಪತ್ರ ಸಂಖ್ಯೆ:ಕಾನೀನಿ/ತಾಂತ್ರಿಕ-4/ಕೆ.ಆರ್.ಡಿ-178/2019-20/2437, ದಿನಾಂಕ:04-10-2019.
2. ವ್ಯವಸ್ಥಾಪಕ ನಿರ್ದೇಶಕರು, ಕಾವೇರಿ ನೀರಾವರಿ ನಿಗಮ, ಬೆಂಗಳೂರು ಇವರ ಪತ್ರ ಸಂಖ್ಯೆ: ಕಾನೀನಿ/ತಾಂತ್ರಿಕ-1/ಕೆ.ಆರ್.ಡಿ-178/2020-21/115, ದಿನಾಂಕ:26-05-2020.
3. ವ್ಯವಸ್ಥಾಪಕ ನಿರ್ದೇಶಕರು, ಕಾವೇರಿ ನೀರಾವರಿ ನಿಗಮ, ಬೆಂಗಳೂರು ಇವರ ಪತ್ರ ಸಂಖ್ಯೆ: ಕಾನೀನಿ/ತಾಂತ್ರಿಕ-1/ಕೆ.ಆರ್.ಡಿ-178/2020-21, ದಿನಾಂಕ:17-08-2020.

**ಪ್ರಸ್ತಾವನೆ :-**

ಮೇಲೆ ಓದಲಾದ (1) ರ ಪತ್ರದಲ್ಲಿ, ವ್ಯವಸ್ಥಾಪಕ ನಿರ್ದೇಶಕರು, ಕಾವೇರಿ ನೀರಾವರಿ ನಿಗಮ, ಬೆಂಗಳೂರು ಇವರು ಕಬಿನಿ ಜಲಾಶಯದ ಕೂಡು ರಸ್ತೆಯನ್ನು ಸಿಮೆಂಟ್ ಕಾಂಕ್ರೀಟ್ ರಸ್ತೆಯಾಗಿ ನಿರ್ಮಿಸುವ (ಕೊಲ್ಲೆಗೌಡನಹಳ್ಳಿ ವೃತ್ತದಿಂದ ಬೀದರಹಳ್ಳಿ ವೃತ್ತದವರೆಗೆ) ರೂ.25.30 ಕೋಟಿ ಮೊತ್ತದ ಅಂದಾಜು ಪ್ರಸ್ತಾವನೆಗೆ ಆಡಳಿತಾತ್ಮಕ ಅನುಮೋದನೆ ನೀಡುವಂತೆ ಕೋರಿದ್ದರು.

2. ಮೇಲೆ ಓದಲಾದ (3) ರ ಪತ್ರದಲ್ಲಿ, ವ್ಯವಸ್ಥಾಪಕ ನಿರ್ದೇಶಕರು, ಕಾವೇರಿ ನೀರಾವರಿ ನಿಗಮ, ಬೆಂಗಳೂರು ಇವರು 2019-20ನೇ ಸಾಲಿಗೆ ಪರಿಶಿಷ್ಟ ಪಂಗಡ ಉಪ ಯೋಜನೆ (ಟಿ.ಎಸ್.ಪಿ.) ಅಡಿ ಲಭ್ಯವಿರುವ ಒಟ್ಟಾರೆ ಅನುದಾನವು ರೂ.372.93 ಕೋಟಿಗಳಾಗಿದ್ದು, ಅಂತೆಯೇ 2019-20ನೇ ಸಾಲಿನ ಕ್ರಿಯಾ ಯೋಜನೆಯು ಸಹ ಅನುಮೋದನೆಗೊಂಡಿರುತ್ತದೆ. ಸದರಿ ಕಾಮಗಾರಿಯನ್ನು ಟಿ.ಎಸ್.ಪಿ ಯೋಜನೆಯಡಿ 2019-20 ನೇ ಸಾಲಿನಲ್ಲಿ ಕಾರ್ಯಕ್ರಮ ಪಟ್ಟಿಯಲ್ಲಿ ಅನುಮೋದನೆಗೊಂಡು ಅನುದಾನದ ಲಭ್ಯತೆಯಿದ್ದು, ಸದರಿ ಕಾಮಗಾರಿಯಿಂದ ಜನಸಂಖ್ಯೆಯಲ್ಲಿ ಶೇ.68ರಷ್ಟು ಪರಿಶಿಷ್ಟ ಪಂಗಡ ಜನಾಂಗವಿರುವ ಒಟ್ಟಾರೆ 25 ಗ್ರಾಮಗಳಿಗೆ ಅನುಕೂಲವಾಗುತ್ತದೆ. ಸದರಿ ಕಾಮಗಾರಿಗೆ ಅವಶ್ಯ ಅನುದಾನ ಲಭ್ಯವಿರುವ ಹಿನ್ನೆಲೆಯಲ್ಲಿ ಪ್ರಸ್ತಾವನೆಗೆ ಆಡಳಿತಾತ್ಮಕ ಅನುಮೋದನೆ ನೀಡುವಂತೆ ಕೋರಿರುತ್ತಾರೆ.

3. ಸದರಿ ಕಾಮಗಾರಿಯ ಡಿ.ಪಿ.ಆರ್. ಪ್ರಸ್ತಾವನೆಗೆ ದಿನಾಂಕ:17-09-2019 ರಂದು ನಡೆದ ಕಾವೇರಿ ನೀರಾವರಿ ನಿಗಮದ ಅಂದಾಜು ಪರಿಶೀಲನಾ ಸಮಿತಿಯು ತೀರುವಳಿ ನೀಡಿದ್ದು, ದಿನಾಂಕ:20-09-2019 ರಂದು ನಡೆದ ನಿಗಮದ ಮಂಡಳಿಯ 70ನೇ ಸಭೆಯಲ್ಲಿ ಅನುಮೋದನೆಯಾಗಿರುತ್ತದೆ ಎಂದು ವ್ಯವಸ್ಥಾಪಕ ನಿರ್ದೇಶಕರು, ಕಾವೇರಿ ನೀರಾವರಿ ನಿಗಮ ನಿಯಮಿತ ರವರು ವರದಿ ಮಾಡಿರುತ್ತಾರೆ.

4. 2019-20 ನೇ ಸಾಲಿಗೆ ಕಾವೇರಿ ನೀರಾವರಿ ನಿಗಮಕ್ಕೆ ಪರಿಶಿಷ್ಟ ಪಂಗಡ ಉಪಯೋಜನೆಯಡಿಯಲ್ಲಿ ಒಟ್ಟು ರೂ.372.93 ಕೋಟಿ ಅನುದಾನ ಒದಗಿಸಲಾಗಿದ್ದು, ಇದರಲ್ಲಿ 7(B) ಅಡಿಯಲ್ಲಿ ನೀರಾವರಿ ಯೋಜನೆಗಳಿಗೆ ಹಾಗೂ ವೈಯಕ್ತಿಕ ನೀರಾವರಿ ಯೋಜನೆಗಳಿಗೆ ಮತ್ತು ಇತರೆ ನೀರಾವರಿಯೇತರ

ಕಾಮಗಾರಿಗಳಿಗೆ ಅವಕಾಶ ಕಲ್ಪಿಸಲಾಗಿದೆ. ಸದರಿ ಕಾಮಗಾರಿಗೆ 2019-20ರ ಪರಿಶಿಷ್ಟ ಪಂಗಡ ಉಪಯೋಜನೆಯ ಅಡಿಯಲ್ಲಿ ಅನುದಾನವನ್ನು ಕಾಯ್ದಿರಿಸಲಾಗಿದ್ದು, ಸದರಿ ಕಾಮಗಾರಿಯಲ್ಲಿ ಶೆ.68.50 ರಷ್ಟು ಅಂದರೆ 9,357 ಜನರು ಪರಿಶಿಷ್ಟ ಪಂಗಡ ಜನಾಂಗದ ಫಲಾನುಭವಿಗಳು ಇರುತ್ತಾರೆ ಹಾಗೂ ಸದರಿ ಕಾಮಗಾರಿಯನ್ನು 2019-20ನೇ ಸಾಲಿನ ಪರಿಶಿಷ್ಟ ಪಂಗಡ ಉಪಯೋಜನೆಯಡಿಯಲ್ಲಿ ಕೈಗೆತ್ತಿಕೊಳ್ಳಬಹುದಾಗಿದೆ.

5. ಸದರಿ ಪ್ರಸ್ತಾವನೆಯನ್ನು ಸರ್ಕಾರದ ಮಟ್ಟದಲ್ಲಿ ಕೂಲಂಕಷವಾಗಿ ಪರಿಶೀಲಿಸಿ ಈ ಕೆಳಕಂಡಂತೆ ಆದೇಶಿಸಲಾಗಿದೆ.

**ಸರ್ಕಾರಿ ಆದೇಶ ಸಂಖ್ಯೆ:ಜಸಂಇ 42 ಎಂಎಂಕೆ 2019,**
**ಬೆಂಗಳೂರು, ದಿನಾಂಕ:18-08-2020**

ಕಬಿನಿ ಜಲಾಶಯದ ಕೂಡು ರಸ್ತೆಯನ್ನು ಸಿಮೆಂಟ್ ಕಾಂಕ್ರೀಟ್ ರಸ್ತೆಯಾಗಿ ನಿರ್ಮಿಸುವ (ಕೊಲ್ಲೆಗೌಡನಹಳ್ಳಿ ವೃತ್ತದಿಂದ ಬೀದರಹಳ್ಳಿ ವೃತ್ತದವರೆಗೆ) ರೂ.25.30 ಕೋಟಿ ಮೊತ್ತದ ಕಾಮಗಾರಿಯ ಅಂದಾಜಿಗೆ, 2019-20 ನೇ ಸಾಲಿನ ಪರಿಶಿಷ್ಟ ಪಂಗಡ ಉಪ ಯೋಜನೆ ಅಡಿಯಲ್ಲಿ ಕಾವೇರಿ ನೀರಾವರಿ ನಿಗಮಕ್ಕೆ ಒದಗಿಸಲಾದ ಅನುದಾನದ ಅಡಿಯಲ್ಲಿ ಸದರಿ ಕಾಮಗಾರಿಯನ್ನು ಕೈಗೆತ್ತಿಕೊಳ್ಳುವ ಪ್ರಸ್ತಾವನೆಗೆ ಆಡಳಿತಾತ್ಮಕ ಅನುಮೋದನೆ ನೀಡಲಾಗಿದೆ.

2. ಈ ಆದೇಶವನ್ನು ಆರ್ಥಿಕ ಇಲಾಖೆಯು ದಿನಾಂಕ:17.08.2020 ಹಾಗೂ ಸಮಾಜ ಕಲ್ಯಾಣ ಇಲಾಖೆಯು ದಿನಾಂಕ:03.08.2020 ರಂದು ನೀಡಿರುವ ಸಹಮತಿಗಳನ್ವಯ ಹೊರಡಿಸಲಾಗಿದೆ.

**ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ**
**ಮತ್ತು ಅವರ ಹೆಸರಿನಲ್ಲಿ**

18/08/2020

**(ಮನೋಹರ ವೈ. ರೊಟ್ಟೆ)**
**ಸರ್ಕಾರದ ಅಧೀನ ಕಾರ್ಯದರ್ಶಿ (ತಾಂ-2),**
**ಜಲ ಸಂಪನ್ಮೂಲ ಇಲಾಖೆ.**

**ಇವರಿಗೆ :-**

1. ಪ್ರಧಾನ ಮಹಾಲೇಖಪಾಲರು (ಸಾಮಾನ್ಯ ಮತ್ತು ಸಾಮಾಜಿಕ ವಲಯ ಲೆಕ್ಕ ಪರಿಶೋಧನ), ಕರ್ನಾಟಕ, ಬೆಂಗಳೂರು.
2. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿರವರ ಆಪ್ತಕಾರ್ಯದರ್ಶಿ, ಜಲಸಂಪನ್ಮೂಲ ಇಲಾಖೆ, ವಿಕಾಸ ಸೌಧ, ಬೆಂಗಳೂರು.
3. ಸರ್ಕಾರದ ಕಾರ್ಯದರ್ಶಿರವರ ಆಪ್ತಕಾರ್ಯದರ್ಶಿ, ಜಲಸಂಪನ್ಮೂಲ ಇಲಾಖೆ, ವಿಕಾಸ ಸೌಧ, ಬೆಂಗಳೂರು.
4. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಸಮಾಜ ಕಲ್ಯಾಣ ಇಲಾಖೆ, ವಿಕಾಸ ಸೌಧ, ಬೆಂಗಳೂರು.
5. ವ್ಯವಸ್ಥಾಪಕ ನಿರ್ದೇಶಕರು, ಕಾವೇರಿ ನೀರಾವರಿ ನಿಗಮ, ಬೆಂಗಳೂರು.
6. ಮುಖ್ಯ ಇಂಜಿನಿಯರ್, ನೀರಾವರಿ (ದಕ್ಷಿಣ) ವಲಯ, ಮೈಸೂರು.
7. ವಿಶೇಷಾಧಿಕಾರಿ ಹಾಗೂ ಪದನಿಮಿತ್ತ ಸರ್ಕಾರದ ಜಂಟಿ ಕಾರ್ಯದರ್ಶಿಗಳು, ಆರ್ಥಿಕ ಇಲಾಖೆ (ಲೋ.ಇ. ಆರ್ಥಿಕ ಕೋಶ), ವಿಧಾನ ಸೌಧ, ಬೆಂಗಳೂರು.
8. ನಿರ್ದೇಶಕರು, ಸಂಪೂರ್ಣ ಯೋಜನಾ ವಿಭಾಗ, ಯೋಜನೆ, ಕಾರ್ಯಕ್ರಮ ಸಂಯೋಜನೆ, ಮತ್ತು ಸಾಂಖ್ಯಿಕ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು.
9. ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿಗಳು.

+ + + + +